3) ಜಾಮಿಯಾ ಮಸೀದಿ, ಬಸವಕಲ್ಯಾಣ ತಾಲ್ಲೂಕು, ಈ ಸಂಸ್ಥೆಗೆ ರೂ. 50,000/– ಗಳ ಅನುದಾನ ಬಿಡುಗಡೆ ಮಾಡಲಾಗಿದೆ.

4) ಕೊಹಿನೂರು ಪಹಾಡ್ ಈ ಸಂಸ್ಥೆಗೆ ರೂ. 50,000/– ಅನುದಾನ ಮಂಜೂರಾಗಿದ್ದು, ಅವಶ್ಯಕ ದಾಖಲೆಗಳನ್ನು ಸಲ್ಲಿಸದೆ ಇರುವ ಕಾರಣ ಅನುದಾನವನ್ನು ಬಿಡುಗಡೆ ಮಾಡಲು ಸಾಧ್ಯವಾಗಿರುವುದಿಲ್ಲ.

ಗಂಗಾ ಕಲ್ಯಾಣ ಯೋಜನೆಯ ಫಲಾನುಭವಿಗಳ ಕುರಿತು

1079 ಶ್ರೀ ಅಮರೇಗೌಡ ಲಿಂಗನಗೌಡ ಬಯ್ಯಾಪುರ ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 2006–07 ಹಾಗೂ 2007–08ನೇ ಸಾಲಿನಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ರಾಯಚೂರು ಮತ್ತು ಕೊಪ್ಪಳ ಜಿಲ್ಲೆಗಳಲ್ಲಿ ಎಷ್ಟು ಕೊಳವೆ ಬಾವಿಗಳನ್ನು ಕೊರೆಯಲಾಗಿದೆ (ತಾಲ್ಲೂಕುವಾರು ವಿವರ ಒದಗಿಸುವುದು);

ಆ) ಈ ಕೊಳವೆ ಬಾವಿಗಳ ಪೈಕಿ ಎಷ್ಟು ಕೊಳವೆ ಬಾವಿಗಳು ಯಶಸ್ವಿಯಾಗಿವೆ ಮತ್ತು ಎಷ್ಟು ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕವನ್ನು ಕಲ್ಪಿಸಿ ಕೊಡಲಾಗಿದೆ; ಎಷ್ಟು ಕೊಳವೆ ಬಾವಿಗಳು ಕಾರ್ಯನಿರತವಾಗಿವೆ?

ಶ್ರೀ ಡಿ. ಸುಧಾಕರ (ಸಮಾಜ ಕಲ್ಯಾಣ ಸಚಿವರು)

ಅ)

ರಾಯಚೂರು ಜಿಲ್ಲೆ			ಕೊಪ್ಪಳ ಜಿಲ್ಲೆ		
ತಾಲ್ಲೂಕಿನ ಹೆಸರು	ಕೊರೆಯಲಾದ ಕೊಳವೆ ಬಾವಿಗಳ ಸಂಖ್ಯೆ		ತಾಲ್ಲೂಕಿನ ಹೆಸರು	ಕೊರೆಯಲಾದ ಕೊಳವೆ ಬಾವಿಗಳ ಸಂಖ್ಯೆ	
	2006–07	2007–08		2006–07	2007–08
1	2	3	4	5	6
ರಾಯಚೂರು (ನ)	271	171	ಕೊಪ್ಪಳ	114	76
ಸಿಂಧನೂರು	107	145	ಕುಷ್ಟಗಿ	113	145
ಮಾನ್ವಿ	139	140	ಯಲಬುರ್ಗಾ	120	111
ಲಿಂಗಸಗೂರು	160	144	ಗಂಗಾವತಿ	259	162
ದೇವದುರ್ಗ	272	181			

ಆ)

ಯಶಸ್ವಿಯಾದ ಕೊಳವೆ ಬಾವಿಗಳು	ವಿದ್ಯುತ್ ಸಂಪರ್ಕ ಪಡೆಯಲಾದ ಕೊಳವೆ ಬಾವಿಗಳು	ಕಾರ್ಯನಿರತವಾದ ಕೊಳವೆ ಬಾವಿಗಳು
1	2	3
2868	1067	1067

ವಿದ್ಯಾರ್ಥಿ ವೇತನ ಕುರಿತು

254 ಡಾ: ಮಹದೇವಪ್ಪ ಹೆಚ್.ಸಿ. (ಟಿ. ನರಸೀಪುರ) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ : ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಯಾವ ತರಗತಿಯಿಂದ ವಿದ್ಯಾರ್ಥಿ ವೇತನವನ್ನು ನೀಡಲಾಗುವುದು; ಯಾವ ಯಾವ ತರಗತಿಗಳ ವಿದ್ಯಾರ್ಥಿಗಳಿಗೆ ಎಷ್ಟೆಷ್ಟು ವಿದ್ಯಾರ್ಥಿವೇತನವನ್ನು ನೀಡಲಾಗುವುದು;

ಆ) ಈ ವಿದ್ಯಾರ್ಥಿವೇತನಕ್ಕೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ವರ್ಷಕ್ಕೆ ನಿಗದಿಪಡಿಸುವ ಅನುದಾನವೆಷ್ಟು ಹಾಗೂ ವಿದ್ಯಾರ್ಥಿನಿಲಯಗಳಲ್ಲಿ ವ್ಯಾಸಂಗ ಮಾಡುವ ಪರಿಶಿಷ್ಟ ಜಾತಿ : ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ನೀಡುವ ಸೌಕರ್ಯಗಳೇನು;

ಇ) ಇದರಿಂದ ಪ್ರತಿ ವರ್ಷ ಎಷ್ಟು ವಿದ್ಯಾರ್ಥಿಗಳು ಇದರ ಪ್ರಯೋಜನ ಪಡೆಯುತ್ತಿದ್ದಾರೆ;

ಈ) ವಿದೇಶಗಳಲ್ಲಿ ಉನ್ನತ ವ್ಯಾಸಂಗಕ್ಕೆ ಅರ್ಹರಿರುವ ಪರಿಶಿಷ್ಟ ಜಾತಿ:ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಸರ್ಕಾರದಿಂದ ಕೈಗೊಳ್ಳುವ ಕ್ರಮಗಳೇನು; ಕಳೆದ ಮೂರು ವರ್ಷಗಳ ಮಾಹಿತಿಯನ್ನು ಒದಗಿಸುವುದು?

ಶ್ರೀ ಡಿ. ಸುಧಾಕರ (ಸಮಾಜ ಕಲ್ಯಾಣ ಸಚಿವರು)

ಅ) ಸಮಾಜ ಕಲ್ಯಾಣ ಇಲಾಖೆಯಿಂದ ರಾಜ್ಯದಲ್ಲಿ 1ನೇ ತರಗತಿಯಿಂದ ಸ್ನಾತಕೋತ್ತರ ಕೋರ್ಸ್‌ಗಳವರೆಗೆ ವ್ಯಾಸಂಗ ಮಾಡುವ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗಗಳ ವಿದ್ಯಾರ್ಥಿಗಳಿಗೆ ವಿವಿಧ ವಿದ್ಯಾರ್ಥಿ ವೇತನಗಳನ್ನು ನೀಡಲಾಗುವುದು. ತರಗತಿವಾರು ಮಂಜೂರು ಮಾಡುವ ವಿದ್ಯಾರ್ಥಿ ವೇತನದ ವಿವರ ಕೆಳಕಂಡಂತಿದೆ.